## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕಿನ ಮಲೆಬೆನ್ನೂರು ಮತ್ತು ಇತರೆ 25 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ/221/ಗ್ರಾನೀಸ(4)2022 ದಿನಾಂಕ:05.04.2022.
2. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ. ಇಲಾಖೆ, ಇವರ ಕಡತ ಸಂ:ಗ್ರಾಕುನೀ&ನೈಇ/588/ಮುಇಂ/ತಾಂತ್ರಿಕ/2021-22.

---

**ಪೀಠಿಕೆ:**

ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕಿನ ಮಲೆಬೆನ್ನೂರು ಮತ್ತು ಇತರೆ 25 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ **ರೂ.499.00ಲಕ್ಷಗಳಿಗೆ** ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸದರಿ ಯೋಜನೆಯ ಕಾಮಗಾರಿಯಲ್ಲಿ Head Works, Water Treatment Plant (SSF Based Plant), Pure Water Gravity Feeder Main Pipe Line ಗಳ ದರಗಳು 2021-22ನೇ ಸಾಲಿನ ಏಕರೂಪ ಅನುಸೂಚಿತ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಿರುವುದರಿಂದ ಅಂದಾಜು ಮೊತ್ತವು ಪರಿಷ್ಕೃತಗೊಂಡಿರುತ್ತದೆ.

ಮೇಲೆ(2)ರಲ್ಲಿ ಓದಲಾದ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ **ರೂ.700.25ಲಕ್ಷಗಳ ಪರಿಷ್ಕೃತ** ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ದಾವಣಗೆರೆ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಉದ್ದೇಶಿತ ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತ **ರೂ.700.25ಲಕ್ಷಗಳಿಗೆ** ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ/221/ಗ್ರಾನೀಸ(4)2022 ಬೆಂಗಳೂರು, ದಿನಾಂಕ:24.06.2022** | 850

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕಿನ ಮಲೆಬೆನ್ನೂರು ಮತ್ತು ಇತರೆ 25 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಪರಿಷ್ಕೃತ **ರೂ.700.25ಲಕ್ಷ(ಏಳು ನೂರು ಲಕ್ಷದ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)** ಗಳಿಗೆ ಈ ಆದೇಶಕ್ಕೆ ಲಗತ್ತಿಸಿರುವ ಘೋಷ್ವಾರೆಯನ್ವಯ **ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ** ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಗೆ ಸಕ್ಷಮ ಪ್ರಾಧಿಕಾರದಿಂದ ಅವಶ್ಯವಿರುವ ಅನುಮೋದನೆ ಪಡೆದು ನಂತರ ಮುಂದಿನ ಕ್ರಮವಹಿಸಬೇಕು. ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಡಿ ಅನುಮೋದನೆಗೊಂಡ ಕುಡಿಯುವ ನೀರಿನ ಯೋಜನೆಯ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು ಇವರು ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆ ಮಾಡಲಾಗುವುದು.

4. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

28/6/22

ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ದಾವಣಗೆರೆ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

..3

7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ದಾವಣಗೆರೆ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಬೆಂಗಳೂರು.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ದಾವಣಗೆರೆ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
16. ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

Augmentation of **Malebennuru MVS** of Harihara Tq Davanagere District RDWS Division – Davanagere

## DETAILED COST ABSTRACT ದಿ:24.06.2022ರ

| Sl No | ITEM OF WORK | AMOUNT (Rs.) | TOTAL (Rs.) |
|---|---|---|---|
| I | **Head Works** | | |
| 1 | V T Pump 75 HP SET (1+1) | 5789700.00 | 6595100.00 |
| 2 | Approach road to JACKWELL(WBM) (100m) | 231000.00 | |
| 3 | RUBBER MAT 1mt X 1mt - 10mm thick | 1000.00 | |
| 4 | Chequered plate repiars in Jackwell | 25000.00 | |
| 5 | MCB at Jackwell | 40000.00 | |
| 6 | Flow meter(400mm dia) | 453500.00 | |
| 7 | Hand Railing around Jackwell | 54900.00 | |
| II | **Water Treatment Plant (SSF based Plant) 325000 LPH** | 1237400.00 | |
| 8 | Staff Quarters at WTP | ~~1191400.00~~ | 7161300.00 ~~6601100.00~~ |
| 9 | Chlorination DI Unit - Electro Chlorinator **(325000LPH)** | 1431200.00 ~~917000.00~~ | |
| 10 | Aerator repair | 30000.00 | |
| 11 | **SSF** (Slow Sand Filter Units) | 2529600.00 | |
| 12 | Approach road to WTP (WBM) 250 Mtr | 577000.00 | |
| 13 | Electric poles and Lighting at WTP site | 133000.00 | |
| 14 | Chain Pulley & Girder arrangements at Existing WTP | 58700.00 | |
| 15 | RUBBER MAT 1mt X 1mt - 10mm thick | 1000.00 | |
| 16 | Flow meter(100mm) | 453500.00 | |
| 17 | 150 Sluice Valve **(For SSF)** | 280400.00 | |
| 18 | SSF outlet pipe of 300mm dia DI K-7 **(50 Mtr)** | 321000.00 | |
| 19 | Aluminium ladder for SSF and Sumps | 108500.00 | |
| III | **Pure Water Gravity Feeder Main Pipe line (35.57KMs)** | 927300.00 | |
| 20 | New outlets for new zone from MBR and bulkflow meter | 927900.00 | 44967800.00 / 44968400.00 ~~45729100.00~~ |
| 21 | Pure Water Gravity Main from Existing-MBR [redacted] to Villages Storage Reservoirs | 43376100.00 ~~44136800.00~~ | |
| 22 | Pure Water Rising Main Air valves | 556900.00 | |
| 23 | MS Pipe at Vadera Basavapura Sump (20m) | 107500.00 | 58724200.00 |
| | **Total Cost Excluding GST, in Rs.** | ~~58925300.00~~ | 58724800.00 |
| | 1174484.0 **DPR Preparation charges, in Rs=** | ~~1178506.00~~ | 1174496.00 |
| | 59898684.0 **Total Basic Cost Excluding GST, in Rs.** | ~~60103806.00~~ | 59899296.00 |
| | 7187842.08 ADD 12% GST AMOUNT | ~~7212456.72~~ | 7187915.52 |
| | 67086526.08 **Total Basic Cost Including GST, in Rs.** | ~~67316262.72~~ | 67087211.52 |
| | 2938473.92 ~~Price adjustment~~,Contigencies & Misc | ~~2735102.08~~ | 2735102.08 |
| | 70025,100.00 69821628.16 **Toatal Cost Including Contigencies, in Rs =** | ~~70051364.80~~ | 69822313.6 |
| | Population for the Present Year - 2021 | 75458 | |
| | **Per Capita Cost, in Rs.** | ~~929.00~~ 926.00 | 928.0 |

ಸಹಾಯಕ ಕಾರ್ಯಪಾಲಕ ಇಂಜಿನಿಯರ್
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ
ಉಪ ವಿಭಾಗ, ಹರಿಹರ.

Director
Rural Drinking Water & Sanitation Dept. &
Ex-Officio Deputy Secretary
Rural Development & Panchayath Raj Dept.

Detailed Project Report

Chief Engineer
Rural Drinking Water & Sanitation Department
2nd Floor, 'E' Block, KHB Complex,
Cauvery Bhavan, K. G. Road, Bangalore-9.

ಕಾರ್ಯಪಾಲಕ ಇಂಜಿನಿಯರ್
ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ವಿಭಾಗ

Niketan Engg and Projects Pvt Ltd

Superintending Engineer,
Rural Drinking Water & Sanitation Circle
Bengaluru.